## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Energon KN Wind Power Pvt. Ltd. ಕಂಪನಿಗೆ ಬಿಜಾಪುರ ಜಿಲ್ಲೆ, ಬಿಜಾಪುರ ತಾಲ್ಲೂಕು ಮತ್ತು ಬಸವನಬಾಗೇವಾಡಿ ತಾಲ್ಲೂಕಿನ ಮಂಗೋಲಿ ಉತ್ನಾಳ್ ಮತ್ತು ಯಗ್ಗದೇಹಾಲ್ ಗ್ರಾಮಗಳಲ್ಲಿ 46 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ:KRED/08/EKNWPPL-46 MW/Mangoli/ Bijapur/2015/1422 ದಿನಾಂಕ: 14.05.2015

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, M/s Energon KN Wind Power Pvt. Ltd. ಕಂಪನಿಯ ಕೋರಿಕೆ ಮೇರೆಗೆ ಬಿಜಾಪುರ ಜಿಲ್ಲೆ ಬಸವನಬಾಗೇವಾಡಿ ಮತ್ತು ಬಿಜಾಪುರ ಜಿಲ್ಲೆಯ ಮನಗೋಳಿ ಉತ್ನಾಳ್ ಮತ್ತು ಯಗ್ಗದೇಹಾಲ್ ಗ್ರಾಮಗಳಲ್ಲಿ 46 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಮಾಡುವ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿಯ ಮುಂದೆ ಮಂಡಿಸಲು ಕೋರುತ್ತಾ, ಈ ಕೆಳಕಂಡ ವಿವರಗಳನ್ನು ಚೆಕ್‌ಲಿಸ್ಟ್ ಹಾಗೂ ಅಕ್ಷಾಂಶ ಮತ್ತು ರೇಖಾಂಶಗಳೊಂದಿಗೆ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

- M/s Energon KN Wind Power Pvt. Ltd. ಕಂಪನಿಯ ಮಾತೃ ಸಂಸ್ಥೆಯಾದ ಮೆ: Energon Energy Pte Ltd. ಕಂಪನಿಯು ಸಿಂಗಾಪುರ್ ದೇಶದಲ್ಲಿದ್ದು, ಇದರ ನೆಟ್‌ವರ್ತ್ ರೂ. 416.08 ಕೋಟಿಗಳಾಗಿರುತ್ತದೆ.
- ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಜಮೀನನ್ನು ಸ್ವಾಧೀನ ಪಡಿಸಿಕೊಂಡು, ವಿಸ್ತೃತಾ ಯೋಜನಾ ವರದಿಯನ್ನು (ಡಿಪಿಆರ್) ಸಲ್ಲಿಸಿರುತ್ತಾರೆ.
- ಈ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಬಳಕೆಗೆ ಬಳಸಿಕೊಂಡು ಉಳಿದ ವಿದ್ಯುತ್ತನ್ನು, ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಗೆ ಮಾರಾಟ ಮಾಡುವ ಕುರಿತು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಡಂಬಡಿಕೆ ಹಾಗೂ ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡುವುದಾಗಿ ತಿಳಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಯೋಜನೆಯನ್ನು ಮುಂದೆ ನಡೆಯುವ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಿ ಸಕ್ರಮಗೊಳಿಸಿಕೊಳ್ಳುವ/ಸ್ಥಿರೀಕರಿಸಿಕೊಳ್ಳುವ ಷರತ್ತಿಗೊಳಪಟ್ಟು, ಯೋಜನೆಗೆ ಅನುಮತಿ ನೀಡಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ : -

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 135 ಎನ್‌ಸಿಇ 2015,**

**ಬೆಂಗಳೂರು, ದಿನಾಂಕ : 15.07.2015.**

M/s Energon KN Wind Power Pvt. Ltd. ಕಂಪನಿಗೆ ಬಿಜಾಪುರ ಜಿಲ್ಲೆ, ಬಿಜಾಪುರ ತಾಲ್ಲೂಕು ಮತ್ತು ಬಸವನಬಾಗೇವಾಡಿ ತಾಲ್ಲೂಕಿನ ಮನಗೋಳಿ ಉತ್ನಾಳ್ ಮತ್ತು ಯಗ್ಗದೇಹಾಲ್ ಗ್ರಾಮಗಳಲ್ಲಿ 46 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಿದೆ:-

Wind Section
ward No.....................
Date:.....................
Sig.....................

| Sl. No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 47 P/14 | 46 MW (23 Nos x 2000kW) | Utanal, Mangoli and Hegadehal, Basavanabagewadi and Bijapur Taluk, Bijapur District. | The identified area is covered in private land near Mangoli and also road crossing towards Mangoli to Ukkali. The area is held in the following Geographical co-ordinates :<br><br>Latitude: 16°39′46″ - 16°43′1″ N<br>Longitude: 75°49′15″ - 75°50′57″E<br>Peaks: 668, 652 and 660m Amsl |
| | Total | 46 MW | | |

<u>ಷರತ್ತುಗಳು</u>

1. ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಈ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ಕಂಪನಿಯು ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ) |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ. | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ. | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ. | 8 ರಿಂದ 10 | 1 |

......3

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

7. M/s. Energon KN Wind Power Pvt. Ltd., ರವರು ತಮ್ಮ ಯೋಜನೆಗೆ ಅಗತ್ಯವಿರುವ ಜಮೀನನ್ನು ಪಡೆದುಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

8. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಬಳಕೆಗೆ / ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ವೀಲಿಂಗ್ ಅಂಡ್ ಬ್ಯಾಂಕಿಂಗ್ ಮೂಲಕ ಮೂರನೆ ವ್ಯಕ್ತಿಯೊಂದಗೆ ಮಾರಾಟ ಮಾಡುವ ಕುರಿತು ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

9. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009 ರನ್ವಯ ಯೋಜನೆಗೆ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.

10. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

11. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

12 ಈ ಆದೇಶವು ಮುಂದಿನ ಹಂಚಿಕೆ ಸಮಿತಿ ಸಭೆಯಲ್ಲಿ ಅನುಮೋದಿಸಿಕೊಳ್ಳುವ / ಸ್ಥಿರೀಕರಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

15/7/15

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.

2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.

7 ಜಿಲ್ಲಾಧಿಕಾರಿಗಳು, ಬಿಜಾಪುರ ಜಿಲ್ಲೆ, ಬಿಜಾಪುರ.

8 ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿಜಾಪುರ ಜಿಲ್ಲೆ, ಬಿಜಾಪುರ.

9 M/s Energon KN Wind Power Pvt. Ltd., 1st Floor, Embassy Icon Annexe, Infantry Road, Bangalore – 560001.

10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.